## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ॥ ಹಟ್ಟಿ ಗೋಲ್ಡ್ ಮೈನ್ಸ್ ಲಿ., ಕಂಪನಿಗೆ ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಎಂ.ಕೋಟ ಗ್ರಾಮದಲ್ಲಿ 14 ಮೆ.ವ್ಯಾ.ಗಳ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ನಿರಾಕ್ಷೇಪಣಾ ನೀಡುವ ಬಗ್ಗೆ.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: 255.

* * *

**ಪ್ರಸ್ತಾವನೆ :-**

ಮೆ॥ ಹಟ್ಟಿ ಗೋಲ್ಡ್ ಮೈನ್ಸ್ ಲಿ., ಕಂಪನಿಗೆ ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಎಂ.ಕೋಟ ಗ್ರಾಮದಲ್ಲಿ 14 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಯೋಜನೆಯ ಸ್ಥಳದ ವಿವರಗಳು ಮತ್ತು ಈ ಕೆಳಕಂಡ ಮಾಹಿತಿಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಮೇಲೆ ಓದಲಾದ ಏಕ ಕಡತ ಪದ್ಧತಿಯ ಕಡತದಲ್ಲಿ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

| | | |
|---|---|---|
| ಯೋಜನಾ ಪ್ರದೇಶದ ಸರ್ವೆ ಸಂಖ್ಯೆ | : | 477, 478, 479, 480, 481 ಮತ್ತು 482 |
| ಯೋಜನಾ ಪ್ರದೇಶದ ವಿಧ | : | ಸ್ವಾಧೀನಪಡಿಸಿಕೊಂಡ ಜಮೀನು |
| ಕಂಪನಿಯ ನೆಟ್‌ವರ್ತ್ | : | ರೂ.1025.95 ಕೋಟಿಗಳು |
| ಸಮೀಪದ ಸಬ್-ಸ್ಟೇಷನ್ ವಿವರ | : | ಹಟ್ಟಿ |
| ಕಂಪನಿಯ ಆದಾಯ ತೆರಿಗೆ ಶಾಶ್ವತ ಪಾವತಿ ಖಾತೆ ಸಂಖ್ಯೆ | : | AABCT 4338 C |
| ಉತ್ಪಾದನೆಯಾಗುವ ವಿದ್ಯುತ್ತಿನ ಉಪಯೋಗದ ವಿಧಾನ | : | ಸ್ವಂತ ಉಪಯೋಗಕ್ಕೆ |
| ನಿಗದಿತ ಶುಲ್ಕ ಪಾವತಿಸಲಾಗಿದೆಯೇ | : | ನೋಂದಣಿ ಶುಲ್ಕ ಪಾವತಿಸಿದೆ |

ಮೆ॥ ಹಟ್ಟಿ ಗೋಲ್ಡ್ ಮೈನ್ಸ್ ಲಿ., ಕಂಪನಿಗೆ ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಎಂ.ಕೋಟ ಗ್ರಾಮದಲ್ಲಿ 14 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ನಿರಾಕ್ಷೇಪಣೆಯನ್ನು ನೀಡುವ ಕುರಿತಾದ ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಗಿನಂತೆ ಆದೇಶಿಸುತ್ತದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 237 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ: 03.9.2016.**

ಮೆ॥ ಹಟ್ಟಿ ಗೋಲ್ಡ್ ಮೈನ್ಸ್ ಲಿ., ಕಂಪನಿಗೆ ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಎಂ.ಕೋಟ ಗ್ರಾಮದಲ್ಲಿ ಸ್ವಂತ ಉಪಯೋಗಕ್ಕೆ 14 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು IPP Category ಅಡಿ ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ನಿರಾಕ್ಷೇಪಣೆಯನ್ನು ನೀಡಲಾಗಿದೆ.

1. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ ಸಂಸ್ಥೆಗಳ ಅನುಮೋದನೆ ಪಡೆದುಕೊಳ್ಳತಕ್ಕದ್ದು;
2. ಮೆ॥ ಹಟ್ಟಿ ಗೋಲ್ಡ್ ಮೈನ್ಸ್ ಲಿ., ಕಂಪನಿಯು ಸೌರ ನೀತಿ 2014-21 ರನ್ವಯ ಈ ಬಾಬ್ತು ಅನ್ವಯಿಸುವ ಶುಲ್ಕ ಹಾಗೂ ಇತರ ಬ್ಯಾಂಕ್ ಖಾತರಿಯನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು;

—2)

3. ಪ್ರಸ್ತಾಪಿತ ಸೋಲಾರ್ ಘಟಕದಿಂದ ಉತ್ಪತ್ತಿಯಾಗುವ ವಿದ್ಯುತ್ತನ್ನು ಸ್ವಂತಕ್ಕೆ ಉಪಯೋಗಿಸಿಕೊಳ್ಳಲು ಅನುಮತಿಸಿದೆ;
4. ಮೆ॥ ಹಟ್ಟಿ ಗೋಲ್ಡ್ ಮೈನ್ಸ್ ಲಿ., ಕಂಪನಿಗೆ ಪ್ರಸ್ತಾಪಿತ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಕರ್ನಾಟಕ ಭೂ-ಸುಧಾರಣೆ ಕಾಯ್ದೆಯನ್ವಯ ಖರೀದಿಸತಕ್ಕದ್ದು ಮತ್ತು ಸದರಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಿಕೊಂಡ ನಂತರವೇ ಸೌರ ವಿದ್ಯುತ್ ಘಟಕಗಳನ್ನು ಸ್ಥಾಪಿಸತಕ್ಕದ್ದು;
5. ಮೆ॥ ಹಟ್ಟಿ ಗೋಲ್ಡ್ ಮೈನ್ಸ್ ಲಿ., ಕಂಪನಿಯು ಸ್ಥಾಪಿಸುತ್ತಿರುವ ಈ ಸೌರ ವಿದ್ಯುತ್ ಘಟಕಕ್ಕೆ ಸರ್ಕಾರದ 2014-21 ರ ಸೋಲಾರ್ ನೀತಿ ಹಾಗೂ ಸರ್ಕಾರದ 2014-19 ರ ಕೈಗಾರಿಕಾ ನೀತಿಗಳ ಪ್ರಕಾರ ಅನ್ವಯವಾಗುವ ಸವಲತ್ತುಗಳು ಲಭ್ಯವಾಗುತ್ತವೆ.
6. ಪ್ರಸ್ತಾಪಿತ ಸೌರ ವಿದ್ಯುತ್ ಘಟಕವನ್ನು ಆದೇಶ ಹೊರಡಿಸಿದ ದಿನಾಂಕದಿಂದ 18 ತಿಂಗಳೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ರದ್ದು ಮಾಡುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎ 22034674.

ಇವರಿಗೆ:
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

ಪ್ರತಿ:

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು-1.
6 ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆ, ರಾಯಚೂರು.
7 ಉಪ ಅರಣ್ಯ ಸಂರಕ್ಷಣಾಧಿಕಾರಿ, ರಾಯಚೂರು ಜಿಲ್ಲೆ, ರಾಯಚೂರು.
8 ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಕಲಬುರ್ಗಿ.
9 ವ್ಯವಸ್ಥಾಪಕ ನಿರ್ದೇಶಕರು, ಹಟ್ಟಿ ಗೋಲ್ಡ್ ಮೈನ್ಸ್ ಕಂಪನಿ ಲಿ., ಮೂರನೇ ಮಹಡಿ, ಕೆಹೆಚ್‌ಬಿ ಶಾಪಿಂಗ್ ಕಾಂಪ್ಲೆಕ್ಸ್, ನ್ಯಾಷನಲ್ ಗೇಮ್ಸ್ ವಿಲೇಜ್, ಕೋರಮಂಗಲ, ಬೆಂಗಳೂರು-560 047.
10 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.